ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಬುಧವಾರ, ದಿನಾಂಕ : 11 ನೇ ಮಾರ್ಚ್, 2020

ಮುಜರಾಯಿ ಇಲಾಖೆ ಬಿಡುಗಡೆ ಮಾಡಿರುವ ಅನುದಾನದ ಬಗ್ಗೆ

ಶ್ರೀ ಕಾಂತ್‌ರಾಜ್ (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

103 (611) ಮಾನ್ಯ ಮುಜರಾಯಿ ಹಾಗೂ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ-

(ಅ) 2019-20ನೇ ಸಾಲಿಗೆ ಮುಜರಾಯಿ ಇಲಾಖೆಗೆ ಒದಗಿಸಿದ್ದ ಅನುದಾನವೆಷ್ಟು; ಯಾವ ಯಾವ ಲೆಕ್ಕ ಶೀರ್ಷಿಕೆಯಲ್ಲಿ ಈ ಅನುದಾನವನ್ನು ನೀಡಲಾಗಿದೆ ;

(ಆ) ಹಾಗಿದ್ದಲ್ಲಿ, ಈ ಅನುದಾನವನ್ನು ಜಿಲ್ಲಾವಾರು ಹಂಚಿಕೆ ಮಾಡಿರುವ ಮಾಹಿತಿಯನ್ನು ನೀಡುವುದು ;

(ಇ) ಅನುದಾನ ಹಂಚಿಕೆ ಮಾಡುವಾಗ ಜಿಲ್ಲಾವಾರು ತಾರತಮ್ಯ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮಗಳೇನು ; (ವಿವರ ನೀಡುವುದು)

(ಈ) ಅನುದಾನವನ್ನು ಹಂಚಿಕೆ ಮಾಡಲು ಕ್ರಮಬದ್ಧವಾದ ಒಂದು ಸಮಗ್ರ ನೀತಿಯನ್ನು/ಮಾನದಂಡವನ್ನು ನಿರೂಪಿಸಲು ಸರ್ಕಾರಕ್ಕಿರುವ ತೊಂದರೆ ಏನು; (ವಿವರ ನೀಡುವುದು)

(ಉ) 2019-20ರಲ್ಲಿ ಯಾವ ಯಾವ ದೇವಸ್ಥಾನಗಳಿಗೆ/ಸಂಸ್ಥೆಗಳಿಗೆ ಅನುದಾನ ಹಂಚಿಕೆ ಮಾಡಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಊ) ಸರ್ಕಾರದ ಮತ್ತು ಧಾರ್ಮಿಕ ದತ್ತಿ ಆಯುಕ್ತರ ವಿವಿಧ ಲೆಕ್ಕ ಶೀರ್ಷಿಕೆಯಡಿ ಇರುವ ಅನುದಾನವೆಷ್ಟು ; ಈ ಅನುದಾನವನ್ನು ಇಂತಹ ಉದ್ದೇಶಕ್ಕೆಂದೇ ಬಳಕೆ ಮಾಡಲು ಕಾನೂನು ಇದೆಯೇ ;

(ಋ) ಇದ್ದಲ್ಲಿ, ಕಾಯ್ದಿರಿಸಿರುವ ಉದ್ದೇಶ ಬಿಟ್ಟು ಬೇರೆ ಬೇರೆ ಸಂಸ್ಥೆಗಳಿಗೆ/ ಕಾರ್ಯಕ್ರಮಗಳಿಗೆ ಹಣವನ್ನು ವಿತರಣೆ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ? (ಸಂಪೂರ್ಣ ಮಾಹಿತಿಯೊಂದಿಗೆ ವಿವರ ನೀಡುವುದು)